ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2023-24ನೇ ಸಾಲಿನ ಆಯವ್ಯಯ ಕಂಡಿಕೆ 143 ರಂತೆ ಸ್ವಾವಲಂಬಿ ಸಾರಥಿ" ಯೋಜನೆಯಡಿ ಪರಿಶಿಷ್ಟ ಜಾತಿಯ ನಿರುದ್ಯೋಗಿ ಯುವಜನರು ನಾಲ್ಕು ಚಕ್ರಗಳ ವಾಹನ ಖರೀದಿಗೆ ಪಡೆಯುವ ಸಾಲದ ಶೇಕಡಾ 75% ರಷ್ಟು ಹಾಗೂ ಗರಿಷ್ಠ ರೂ.4.00 ಲಕ್ಷಗಳ ಸಹಾಯಧನ ನೀಡುವ ಬಗ್ಗೆ.

ಉಲ್ಲೇಖ: 1. 2023-24ನೇ ಸಾಲಿನ ಆಯವ್ಯಯ ಕಂಡಿಕೆ 143.

2. ವ್ಯವಸ್ಥಾಪಕ ನಿರ್ದೇಶಕರು, ಡಾ: ಬಿ.ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮ ಇವರ ಪತ್ರ ಸಂಖ್ಯೆ:ಅಂಅನಿ/ಐ&ಟಿ/ಸಿಆರ್/2023-24, ದಿನಾಂಕ:12.07.2023.

******

ಪ್ರಸ್ತಾವನೆ:

ಮೇಲೆ ಕ್ರಮಾಂಕ (1)ರಲ್ಲಿ 2023-24ನೇ ಸಾಲಿನ ಆಯವ್ಯಯ ಕಂಡಿಕೆ 143ರಲ್ಲಿ ಈ ಕೆಳಕಂಡಂತೆ ಘೋಷಿಸಲಾಗಿದೆ.

> **"ಸ್ವಾವಲಂಬಿ ಸಾರಥಿ" ಯೋಜನೆಯಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನಿರುದ್ಯೋಗಿ ಯುವಜನರು ನಾಲ್ಕು ಚಕ್ರಗಳ ವಾಹನ ಖರೀದಿಗೆ ಪಡೆಯುವ ಸಾಲದ ಶೇಕಡ 75% ಗರಿಷ್ಟ ರೂ.4.00 ಲಕ್ಷಗಳ ಸಹಾಯಧನ ನೀಡುವ ಮೂಲಕ ಸ್ವಯಂ ಉದ್ಯೋಗ ಕೈಗೊಳ್ಳಲು ಪ್ರೋತ್ಸಾಹಿಸಲಾಗುವುದು"**

ಮೇಲೆ ಓದಲಾದ ಕ್ರಮಾಂಕ (2)ರ ದಿನಾಂಕ:12.07.2023ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಡಾ: ಬಿ.ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮ ಇವರು ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಡಾ: ಬಿ.ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮವು ಪರಿಶಿಷ್ಟ ಜಾತಿ ನಿರುದ್ಯೋಗ ಯುವಕ-ಯುವತಿಯರಿಗೆ ಸ್ವಯಂ ಉದ್ಯೋಗ ಕೈಗೊಳ್ಳಲು "ಸ್ವಯಂ ಉದ್ಯೋಗ ಯೋಜನೆ" ಅನುಷ್ಠಾನ ಮಾಡುತ್ತಿದ್ದು, ಈ ಯೋಜನೆಯಡಿ ನೇರಸಾಲ ಯೋಜನೆ ಮತ್ತು ಐ.ಎಸ್.ಬಿ ಯೋಜನೆಗಳನ್ನು ಅನುಷ್ಠಾನಮಾಡುತ್ತಿದೆ.

ದಿನಾಂಕ:20.05.2022ರ ಸನ್ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ನಡೆದ ಅನುಸೂಚಿತ ಜಾತಿಗಳು / ಅನುಸೂಚಿತ ಪಂಗಡಗಳ ಅಭಿವೃದ್ಧಿ ಪರಿಷತ್ ಸಭೆಯಲ್ಲಿ ಅನುಮೋದಿಸಿದಂತೆ ನೇರಸಾಲ ಯೋಜನೆಯಡಿ ಹಣ್ಣು ತರಕಾರಿ, ಮೀನು, ಮಾಂಸ ಮಾರಾಟ, ಹಸು/ಕುರಿ/ಹಂದಿ/ಮೊಲ ಸಾಕಣಿಕೆ ಇತ್ಯಾದಿ ಕಿರು ಆರ್ಥಿಕ ಚಟುವಟಿಕೆಗಳನ್ನು ರೂ.1.00 ಲಕ್ಷ ಘಟಕ ವೆಚ್ಚದಲ್ಲಿ ಕೈಗೊಳ್ಳಲು ನಿಗಮದಿಂದ ರೂ.50,000/- ಗಳ ಸಹಾಯಧನ ಮತ್ತು 50,000/- ಗಳ ಸಾಲ ನೀಡಲಾಗುತ್ತಿದೆ.

ಸಣ್ಣ ಕೈಗಾರಿಕೆ, ಸೇವಾ ಕ್ಷೇತ್ರ ಮತ್ತು ಉದ್ಯಮ ಕೇತ್ರದಲ್ಲಿ ಸ್ವಯಂ ಉದ್ಯೋಗ ಘಟಕಗಳನ್ನು ಕೈಗೊಳ್ಳಲು ಐ.ಎಸ್.ಬಿ ಯೋಜನೆಯಡಿ ನಿಗಮದಿಂದ ಸಹಾಯಧನ ಮತ್ತು ಬ್ಯಾಂಕುಗಳಿಂದ ಸಾಲ ನೀಡಲಾಗುತ್ತಿದೆ. ಘಟಕ ವೆಚ್ಚದ 70% ಅಥವಾ ಗರಿಷ್ಟ 2.00 ಲಕ್ಷ ಸಹಾಯಧನ ನೀಡಲಾಗುತ್ತಿದೆ. ಉಳಿದ ಭಾಗ ಬ್ಯಾಂಕ್ ಸಾಲವಾಗಿರುತ್ತದೆ. ಮುಂದುವರೆದು ಸರಕು ಸಾಗಾಣಿಕೆ ವಾಹನ ಖರೀದಿಸಲು ಘಟಕ ವೆಚ್ಚದ 70% ಅಥವಾ ಗರಿಷ್ಟ ರೂ.3.50 ಲಕ್ಷ ಸಹಾಯಧನ ನೀಡಲಾಗುತ್ತಿದೆ. ಉಳಿದ ಭಾಗ ಸಾಲವಾಗಿರುತ್ತದೆ.

...2

S.V

14/09/2023

ಆಯವ್ಯಯದ ಕಂಡಿಕೆ 143 ರಂತೆ ಪ್ರಸ್ತುತ ಚಾಲ್ತಿಯಲ್ಲಿರುವ ಸರಕು ಸಾಗಾಣಿಕೆ ವಾಹನ ಖರೀದಿಸಲು ಘಟಕ ವೆಚ್ಚದ 70% ಅಥವಾ ಗರಿಷ್ಠ 3.50 ಲಕ್ಷ ಸಹಾಯಧನ ನೀಡಲಾಗುತ್ತಿರುವುದನ್ನು ಪರಿಷ್ಕರಿಸಿ ಘಟಕ ವೆಚ್ಚದ 75% ಅಥವಾ ಗರಿಷ್ಠ ರೂ.4.00 ಲಕ್ಷ ಸಹಾಯಧನ ನೀಡಲು ಮತ್ತು ಈ ಯೋಜನೆಯನ್ನು "ಸ್ವಾವಲಂಬಿ ಸಾರಥಿ" ಯೋಜನೆ ಎಂದು ನಾಮಕರಣ ಮಾಡಿ ಆದೇಶ ಹೊರಡಿಸುವಂತೆ ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲೆ ವಿವರಿಸಲಾದ ಎಲ್ಲಾ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು, ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಸಕಇ 254 ಎಸ್‌ಡಿಸಿ 2023, ಬೆಂಗಳೂರು, ದಿನಾಂಕ:14.09.2023

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಸದರಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಚಾಲ್ತಿಯಲ್ಲಿರುವ Delegation of Financial Powers ರಂತೆ ಕ್ರಮವಹಿಸಲು ಹಾಗೂ ಪ್ರಸಕ್ತ ಸಾಲಿಗೆ ವಿವಿಧ ನಿಗಮಗಳಿಗೆ ಹಾಗೂ ಇಲಾಖೆಗೆ ಒದಗಿಸಿರುವ ಅನುದಾನದ ಮಿತಿಯಲ್ಲಿಯೇ ಜಾರಿಗೊಳಿಸಲು ಮತ್ತು ಸದರಿ ಯೋಜನೆಗೆ ತಂತ್ರಾಂಶವನ್ನು (Software) ಕಡ್ಡಾಯವಾಗಿ ಅಳವಡಿಸಿಕೊಳ್ಳುವ ಷರತ್ತಿನೊಂದಿಗೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನಿರುದ್ಯೋಗಿ ಯುವಜನರು ಸ್ವಯಂ ಉದ್ಯೋಗ ಕೈಗೊಳ್ಳಲು 4 ಚಕ್ರಗಳ ವಾಹನ ಖರೀದಿಗೆ ಪಡೆಯುವ ಸಾಲದ ಶೇ.75% ರಷ್ಟು ಗರಿಷ್ಠ ರೂ.4.00 ಲಕ್ಷಗಳ ಸಹಾಯಧನ ನೀಡುವ ಮೂಲಕ ಸ್ವಯಂ ಉದ್ಯೋಗ ಕೈಗೊಳ್ಳಲು ಪ್ರೋತ್ಸಾಹಿಸುವ ಯೋಜನೆಯನ್ನು ಅನುಷ್ಠಾನಗೊಳಿಸಿ ಆದೇಶಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಎಫ್ ಡಿ 630 EXP-3 2023, ದಿನಾಂಕ:24.08.2023 ಮತ್ತು ಯೋಜನೆ ಇಲಾಖೆಯ ಟಿಪ್ಪಣಿ ಸಂಖ್ಯೆ:ಪಿಡಿಎಸ್ 46 ಐಎಂಎಂ 2023, ದಿನಾಂಕ:07.08.2023ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

S.V
(ಎಸ್.ವಿ ಕಲಾವತಿ) 14/09/2023
ಸರ್ಕಾರದ ಉಪ ಕಾರ್ಯದರ್ಶಿ-3,
ಸಮಾಜ ಕಲ್ಯಾಣ ಇಲಾಖೆ.

ಇವರಿಗೆ:

14/9/23

1. ಮಹಾಲೇಖಪಾಲರು, (ಎ&ಇ, ಲೆಕ್ಕಪರಿಶೋಧನೆ-1 ಮತ್ತು 2), ಕರ್ನಾಟಕ, ಬೆಂಗಳೂರು.
2. ವ್ಯವಸ್ಥಾಪಕ ನಿರ್ದೇಶಕರು, ಡಾ: ಬಿ.ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮ, ಬೆಂಗಳೂರು
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ, ಬೆಂಗಳೂರು
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ತಾಂಡ ಅಭಿವೃದ್ಧಿ ನಿಗಮ, ಬೆಂಗಳೂರು
5. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಆದಿ ಜಾಂಬವ ಅಭಿವೃದ್ಧಿ ನಿಗಮ, ಬೆಂಗಳೂರು

6. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಭೂಮಿ ಅಭಿವೃದ್ಧಿ ನಿಗಮ, ಬೆಂಗಳೂರು
7. ವ್ಯವಸ್ಥಾಪಕ ನಿರ್ದೇಶಕರು, ಪರಿಶಿಷ್ಟ ಜಾರಿ/ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮ, ಬೆಂಗಳೂರು
8. ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಮಾಹಿತಿ ವಿಭಾಗ (ಪಿಎಂಐ), ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
9. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ 3&9), ವಿಧಾನಸೌಧ, ಬೆಂಗಳೂರು.
10. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ

<u>ಪ್ರತಿ ಮಾಹಿತಿಗಾಗಿ:-</u>

1. ಮಾನ್ಯ ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.